ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ಸದರಿ ಕಾಮಗಾರಿಯನ್ನು ಮಂಡ್ಯ ಜಿಲ್ಲೆಯ ವಿಶೇಷ ಯೋಜನೆಯ ಅಡಿಯಲ್ಲಿ ರೂ. 242 ಲಕ್ಷಗಳಿಗೆ ತಾಂತ್ರಿಕ ಮಂಜೂರಾತಿ ನೀಡಲಾಗಿದ್ದು, ಟೆಂಡರ್ ಆಹ್ವಾನಿಸಲಾಗಿದೆ. ಸದ್ಯದಲ್ಲೇ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಆ) ಅಟ್ಟಿಹಳ್ಳಿ ಸೇತುವೆಯನ್ನು ಹಳ್ಳಿರಸ್ತೆಯ ಮೇಲೆ ನಿರ್ಮಿಸಬೇಕಾಗಿದ್ದು, ಈ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯು ಕ್ರಮ ಕೈಗೊಳ್ಳಬೇಕಾಗಿರುತ್ತದೆ.

ಇ) ಉದ್ಭವಿಸುವುದಿಲ್ಲ.

ಈ) ಈ ಸೇತುವೆ ನಿರ್ಮಾಣವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಅಧೀನದಲ್ಲಿದೆ. ಇದು ಲೋಕೋಪಯೋಗಿ ಇಲಾಖೆ ಸೇತುವೆಯಾಗಿರುವುದಿಲ್ಲ.

ಶ್ರೀರಂಗಪಟ್ಟಣದ ತಾಲ್ಲೂಕು ಕೇಂದ್ರಗಳಲ್ಲಿ ಮಿನಿ ವಿಧಾನಸೌಧ

1793 (2228) ಶ್ರೀಮತಿ ಪಾರ್ವತಮ್ಮ ಶ್ರೀಕಂಠಯ್ಯ (ಶ್ರೀರಂಗಪಟ್ಟಣ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಾಲ್ಲೂಕು ಕೇಂದ್ರಗಳಲ್ಲಿ ಮಿನಿ ವಿಧಾನ ಸೌಧಗಳ ನಿರ್ಮಾಣ ಮಾಡಲು ಸರ್ಕಾರದಿಂದ ಏನಾದರೂ ಕ್ರಮ ಕೈಗೊಳ್ಳಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ ಎಷ್ಟು ತಾಲ್ಲೂಕುಗಳಲ್ಲಿ ಮಿನಿ ವಿಧಾನ ಸೌಧದ ಕಟ್ಟಡ ನಿರ್ಮಾಣ ಮಾಡಲಾಗಿದೆ.

ಇ) ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಮಿನಿ ವಿಧಾನ ಸೌಧ ತೆರೆಯಲು ಏನಾದರೂ ಕ್ರಮಕ್ಕೆಗೊಳ್ಳಲಾಗಿದೆ ಪ್ರಾರಂಭವಾಗುತ್ತದೆ?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು)

ಅ) ಹೌದು.

ಆ) 56 ತಾಲ್ಲೂಕುಗಳಲ್ಲಿ ಮಿನಿ ವಿಧಾನ ಸೌಧಗಳನ್ನು ನಿರ್ಮಾಣ ಮಾಡಲಾಗಿದೆ.

ಇ) ಅಗತ್ಯ ಸಂಪನ್ಮೂಲಗಳನ್ನು ಸಂಗ್ರಹಿಸುವ ಕಾರ್ಯಗತಿ ಅಂತಿಮಗೊಳಿಸುವ ಬಗ್ಗೆ ಸರ್ಕಾರವು ಪರಿಶೀಲಿಸುತ್ತಿದೆ. ಸಂಪನ್ಮೂಲಗಳನ್ನು ಸಂಗ್ರಹಿಸುವ ಕಾರ್ಯ ಸಂಪೂರ್ಣಗೊಂಡ ನಂತರ ಸವಿವರ ಅಂದಾಜುಪಟ್ಟಿಯನ್ನು ಅಂತಿಮಗೊಳಿಸಿ ಮಿನಿ ವಿಧಾನ ಸೌಧ ನಿರ್ಮಾಣವನ್ನು ಪ್ರಾರಂಭಿಸಲಾಗುವುದು.

ರಾಜ್ಯದ ಮುಜರಾಯಿ ದೇವಸ್ಥಾನಗಳಿಗೆ ಹೆಚ್ಚಿನ ಹಣ ಬಿಡುಗಡೆ

1794 (1339) ಶ್ರೀ ಪಾಟೀಲ್ ಡಿ.ಆರ್. (ಗದಗ್) ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಗೆ ಸೇರಿದೇ ಇರುವ ದೇವಸ್ಥಾನ ಸಂಖ್ಯೆ ಎಷ್ಟು: (ಜಿಲ್ಲಾವಾರು ವಿವರ ನೀಡುವುದು)

ಆ) ಈ ದೇವಸ್ಥಾನಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ 2000-2001ನೇ ಸಾಲಿನಲ್ಲಿ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಹಣವೆಷ್ಟು?